# 'ರಾಷ್ಟ್ರಪತಿಗೆ ಬೇಕಾದರೂ ರಾಜೀನಾಮೆ ಕೊಡಲಿ'

- ಆನಂದ್ ಸಿಂಗ್ ರಾಜೀನಾಮೆ ಮಾತ್ರ ತಲುಪಿದೆ
- ಸಾರ್ವಜನಿಕರ ಆಕ್ಷೇಪಣೆಗೆ ಅವಕಾಶವಿದೆ: ಸ್ಪೀಕರ್ ರಮೇಶ್ ಕುಮಾರ್

**ಬೆಂಗಳೂರು:** ಆನಂದ್ ಸಿಂಗ್ ರಾಜೀನಾಮೆ ಮಾತ್ರ ತಲುಪಿದ್ದು ಅವರ ರಾಜೀನಾಮೆ ಕುರಿತು ಇದುವರೆಗೂ ಯಾರೂ ಆಕ್ಷೇಪ ವ್ಯಕ್ತಪಡಿಸಿಲ್ಲ, ರಾಜ್ಯದ ಯಾವುದೇ ಪ್ರಜೆಗಳು ಆಕ್ಷೇಪ ಎತ್ತಿದರೂ ಆ ಬಗ್ಗೆ ವಿಚಾರಣೆ ನಡೆಸಿ, ಮುಂದಿನ ಕ್ರಮ ಕೈಗೊಳ್ಳುತ್ತೇನೆ ಎಂದು ವಿಧಾನಸಭಾಧ್ಯಕ್ಷ ರಮೇಶ್ ಕುಮಾರ್ ಹೇಳಿದ್ದಾರೆ.

ಸುದ್ದಿಗಾರರ ಜತೆ ಮಾತನಾಡಿ, ಆನಂದ್ ಸಿಂಗ್ ತಮಗೆ ರಾಜೀನಾಮೆ ನೀಡಿದ ಬಳಿಕ ರಾಜ್ಯಪಾಲರಿಗೆ ರಾಜೀನಾಮೆ ಸಲ್ಲಿಸಿರುವ ಬಗ್ಗೆ ಪರೋಕ್ಷ ಅಸಮಾಧಾನ ಹೊರಹಾಕಿದರು. 'ಬೇಕಾದರೆ ರಾಷ್ಟ್ರಪತಿಗೆ ರಾಜೀನಾಮೆ ಕೊಡಲಿ. ನಾನು ನನ್ನ ಜವಾಬ್ದಾರಿಯನ್ನು ನಿಭಾಯಿಸುತ್ತೇನೆ. ಶಾಸಕರಾದವರಿಗೆ ಯಾರಿಗೆ ರಾಜೀನಾಮೆ ನೀಡಬೇಕೆಂಬ ಕನಿಷ್ಠ ಜ್ಞಾನವಾದರೂ ಇರಬೇಕು. ಅದೂ ಇಲ್ಲದಿರುವುದು ನಮ್ಮ ದುರ್ದೈವ' ಎಂದು ಬೇಸರ ವ್ಯಕ್ತಪಡಿಸಿದರು.

'ಭಾರತೀಯ ಚುನಾವಣಾ ವ್ಯವಸ್ಥೆಯಲ್ಲಿ ಚುನಾಯಿತ ಪ್ರತಿನಿಧಿಗಳನ್ನು ವಾಪಸ್ ಕರೆಸಿಕೊಳ್ಳುವ ಅಧಿಕಾರ ಮತದಾರರಿಗೆ ಇಲ್ಲ, ಆದರೆ, ಅವರ ಅಭಿಪ್ರಾಯವನ್ನು ಹೇಳಲು ಅವಕಾಶ ಇದೆ. ಹೀಗಾಗಿ, ಸಾರ್ವಜನಿಕರು ಯಾವುದೇ ಶಾಸಕರ ರಾಜೀನಾಮೆಗೆ ಆಕ್ಷೇಪ ವ್ಯಕ್ತಪಡಿಸಿದರೂ, ಅದನ್ನು ಆಲಿಸಿ ಮುಂದಿನ ಕ್ರಮ ಕೈಗೊಳ್ಳಬೇಕಾಗುತ್ತದೆ. ನಾನು ನನ್ನ ಜವಾಬ್ದಾರಿಯನ್ನು ಕಾನೂನು ಪ್ರಕಾರ ನಿಭಾಯಿಸುತ್ತೇನೆ' ಎಂದು ಹೇಳಿದರು. ಇದೇ ವೇಳೆ, ಕಾಂಗ್ರೆಸ್ ಬಂಡಾಯ ಶಾಸಕರ ವಿರುದ್ಧದ ವಿಪ್ ಉಲ್ಲಂಘನೆ ಪ್ರಕರಣ ವಿಚಾರಣೆ ಹಂತದಲ್ಲಿದ್ದು ಇನ್ನೂ ವಿಚಾರಣಾ ಪ್ರಕ್ರಿಯೆ ನಡೆಯುತ್ತಿದೆ ಎಂದರು.

ಉದಯ 4/7/19

## ಅತೃಪ್ತರಿಂದ ಮುಂದುವರಿದ ಗೊಂದಲ

**ಬೆಂಗಳೂರು:** ಮೈತ್ರಿ ಸರ್ಕಾರವನ್ನು ನಿರಂತರ ತುದಿಗಾಲ ಮೇಲೆ ನಿಲ್ಲುವಂತೆ ಮಾಡುತ್ತಿರುವ ಅತೃಪ್ತ ಶಾಸಕರು ರಾಜೀನಾಮೆ ನೀಡುವ ವಿಚಾರದಲ್ಲಿ ಮತ್ತ ಗೊಂದಲ ಮುಂದುವರೆಸಿದ್ದಾರೆ.

ಆನಂದ್ ಸಿಂಗ್ ಹಾಗೂ ರಮೇಶ್ ಜಾರಕಿಹೊಳಿ ರಾಜೀನಾಮೆ ನೀಡಿದ ಮೇಲೆ ಹಂತ ಹಂತವಾಗಿ ಕನಿಷ್ಠ 15 ಶಾಸಕರು ರಾಜೀನಾಮೆ ನೀಡುವ ಕುರಿತು ಮಂಗಳವಾರ ತೀರ್ಮಾನಿಸಿದ್ದರು ಎಂದು ಹೇಳಲಾಗಿತ್ತು. ಅದರಂತೆ ಬುಧವಾರ ಕನಿಷ್ಠ ನಾಲ್ವರು ಶಾಸಕರು ತಮ್ಮ ಶಾಸಕ ಸ್ಥಾನಕ್ಕೆ ರಾಜೀನಾಮೆ ನೀಡುತ್ತಾರೆ ಎಂದು ಅತೃಪ್ತ ಶಾಸಕರ ಆಪ್ತ ಮೂಲಗಳಿಂದ ತಿಳಿದು ಬಂದಿತ್ತು. ಅಲ್ಲದೇ ಫ್ಯಾಕ್ಸ್ ಮೂಲಕ ರಾಜೀನಾಮೆ ನೀಡಿದ್ದ ರಮೇಶ್ ಜಾರಕಿಹೊಳಿ ಕೂಡ ಖುದ್ದಾಗಿ ಸ್ಪೀಕರ್ ರಮೇಶ್ ಕುಮಾರ್ ಅವರನ್ನು ಭೇಟಿ ಮಾಡಿ ರಾಜೀನಾಮೆ ಸಲ್ಲಿಸುತ್ತಾರೆ ಎಂದು ಹೇಳಲಾಗಿತ್ತು. ಆದರೆ, ಬುಧವಾರ ರಮೇಶ್ ಜಾರಕಿಹೊಳಿ ನೇತೃತ್ವದಲ್ಲಿ ಅಜ್ಞಾತ ಸ್ಥಳದಲ್ಲಿ ಅತೃಪ್ತರು ಸಭೆ ನಡೆಸಿದ್ದಾರೆ. ಆದರೆ, ಯಾವಾಗ ರಾಜೀನಾಮೆ ನೀಡಬೇಕು ಎನ್ನುವ ಬಗ್ಗೆ ಸ್ಪಷ್ಟ ನಿರ್ಧಾರ ತೆಗೆದುಕೊಂಡಿಲ್ಲ. ಅತೃಪ್ತರಲ್ಲಿಯೇ ಕೆಲವರು ರಾಜೀನಾಮೆಗೆ ಇನ್ನೂ ಮೀನಾಮೇಷ ಎಣಿಸುತ್ತಿದ್ದಾರೆ. ಹೀಗಾಗಿ ಅವರಲ್ಲಿಯೇ ಗೊಂದಲ ಮುಂದುವರೆದಿದೆ ಎಂದು ತಿಳಿದು ಬಂದಿದೆ.

## ಆನಂದ ಸಿಂಗ್ ನಿವಾಸದೆದುರು ಕಾಂಗ್ರೆಸ್ ಪ್ರತಿಭಟನೆ

**ಹೊಸಪೇಟೆ:** ಕಾಂಗ್ರೆಸ್ ಪಕ್ಷದ ಚಿಹ್ನೆಯಿಂದ ಗೆದ್ದು ಶಾಸಕರಾಗಿರುವ ಆನಂದಸಿಂಗ್ ಕೂಡಲೇ ರಾಜೀನಾಮೆ ಹಿಂಪಡೆಯಬೇಕು ಎಂದು ಒತ್ತಾಯಿಸಿ ಕಾಂಗ್ರೆಸ್ ಮುಖಂಡರು, ಶಾಸಕ ಆನಂದಸಿಂಗ್ ನಿವಾಸದ ಎದುರು ಬುಧವಾರ ಪ್ರತಿಭಟನೆ ನಡೆಸಿದರು. 2007ರಲ್ಲಿ ಆನಂದ ಸಿಂಗ್ ಮಂತ್ರಿಯಾಗಿದ್ದ ಸಂದರ್ಭದಲ್ಲಿ ಜಿಂದಾಲ್ ಕಂಪನಿಗೆ ಭೂಮಿಯನ್ನು ಲೀಸ್ ಕಂಸೇಲ್ ಮಾಡಿಕೊಳ್ಳಲಾಗಿತ್ತು. ಆಗಲೇ ಆನಂದ ಸಿಂಗ್ ವಿರೋಧಿಸಬೇಕಾಗಿತ್ತು. ಈಗ ಜಿಂದಾಲ್ ಭೂಮಿ ಪರಭಾರೆ ವಿಚಾರವಾಗಿ ರಾಜೀನಾಮೆ ನೀಡಿರುವುದು ಸರಿಯಲ್ಲ ಎಂದರು. ವಿಎಸ್‌ಆರ್ ಕಾರ್ಖಾನೆ ಮುಚ್ಚಿದ್ದರಿಂದ ರೈತರು ಪರದಾಡುವಂತಾಗಿದೆ. ತುಂಗಭದ್ರಾ ಜಲಾಶಯ ನೀರಿಲ್ಲದೇ ಬಣಗುಡುತ್ತಿದೆ. ವಿಜಯನಗರ ಜಿಲ್ಲೆಯನ್ನಾಗಿ ಮಾಡಲು ಪ್ರಯತ್ನಿಸಬೇಕು. ಕ್ಷೇತ್ರದಲ್ಲಿ ಸಾಕಷ್ಟು ಸಮಸ್ಯೆಗಳಿದ್ದು ಇವುಗಳ ಪರಿಹಾರಕ್ಕೆ ಮುಂದಾಗದೇ ರಾಜೀನಾಮೆ ನೀಡಿದ್ದು ಖಂಡನೀಯ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಪ್ರತಿಭಟನೆ ನಡೆಸುತ್ತಿರುವ ವಿಷಯ ತಿಳಿದ ಆನಂದ್ ಸಿಂಗ್, ಮನೆಯಿಂದ ಹೊರ ಬಂದು ಪ್ರತಿಭಟನಾಕಾರರನ್ನು ಭೇಟಿ ಮಾಡಿದರು. ಈ ವೇಳೆ, ಕಾಂಗ್ರೆಸ್ ಮುಖಂಡರು ರಾಜೀನಾಮೆ ಹಿಂಪಡೆಯುವಂತೆ ಮನವೊಲಿಸಲು ಪ್ರಯತ್ನಿಸಿದರು. ಇದಕ್ಕೆ ಪ್ರತಿಕ್ರಿಯಿಸದ ಸಿಂಗ್, ವಾಪಸ್ ಮನೆಯೊಳಗೆ ತೆರಳಿದರು ಎನ್ನಲಾಗಿದೆ.